ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003

ಸಂಖ್ಯೆ:ಎ8./ಪ.ಫ.ಪ್ರ./ಸುತ್ತೋಲೆ/24/2018-19 ದಿನಾಂಕ:17.07.2018

**ಸುತ್ತೋಲೆ**

ವಿಷಯ:-ಜೂನ್-2018ರ ಎಸ್.ಎಸ್.ಎಲ್.ಸಿ. ಪೂರಕ ಪರೀಕ್ಷೆಯ ಫಲಿತಾಂಶ ಪ್ರಕಟಣೆ ಹಾಗೂ ಫಲಿತಾಂಶ ಪಟ್ಟಿ ಪರಿಶೀಲನೆ ಕುರಿತು.

*****

ಜೂನ್-2018ರ ಎಸ್.ಎಸ್.ಎಲ್.ಸಿ. ಪೂರಕ ಪರೀಕ್ಷೆಯ ಫಲಿತಾಂಶ ಪಟ್ಟಿಯನ್ನು SATS ಜಾಲತಾಣದಲ್ಲಿ ಅಪ್‌ಲೋಡ್ ಮಾಡಲಾಗಿದೆ. ಪರೀಕ್ಷಾ ಫಲಿತಾಂಶವನ್ನು ಆಯಾ ಶಾಲೆಗಳ ಮುಖ್ಯಶಿಕ್ಷಕರು SATS ಜಾಲತಾಣದಲ್ಲಿ ಡೌನ್‌ಲೋಡ್ ಮಾಡಿಕೊಂಡು ತಮ್ಮ ಶಾಲೆಯಲ್ಲಿ ದಿನಾಂಕ:**20.07.2018** ರಂದು ಬೆಳಿಗ್ಗೆ 10-30 ಘಂಟೆಗೆ ಪ್ರಕಟಿಸಲು ಸೂಚಿಸಿದೆ.

ಜೂನ್-2018ರ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷಾ ಉತ್ತರ ಪತ್ರಿಕೆಗಳ ಛಾಯಾಪ್ರತಿಗಾಗಿ ಹಾಗೂ ಮರುಮೌಲ್ಯಮಾಪನಕ್ಕಾಗಿ ನಿಗಧಿತ ಅರ್ಜಿ ಸಲ್ಲಿಸುವ ವೇಳಾ ಪಟ್ಟಿಯು ಈ ಕೆಳಕಂಡಂತಿದೆ.

| ವಿವರ | ದಿನಾಂಕ |
|---|---|
| ಜೂನ್ 2018ರ ಎಸ್‌ಎಸ್‌ಎಲ್‌ಸಿ ಪೂರಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ | 19.07.2018 |
| ಜೂನ್ 2018ರ ಎಸ್‌ಎಸ್‌ಎಲ್‌ಸಿ ಪೂರಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 28.07.2018 |
| ಜೂನ್ 2018ರ ಎಸ್‌ಎಸ್‌ಎಲ್‌ಸಿ ಪೂರಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ | 21.07.2018 |
| ಜೂನ್ 2018ರ ಎಸ್‌ಎಸ್‌ಎಲ್‌ಸಿ ಪೂರಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 04.08.2018 |

ಪ್ರಸ್ತುತ ಸಾಲಿನಿಂದ ನೇರವಾಗಿ ಮರು ಎಣಿಕೆಗಾಗಿ ಅರ್ಜಿ ಸಲ್ಲಿಸುವಂತಿಲ್ಲ. ಮರು ಎಣಿಕೆ ಬಯಸುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಸಂಬಂಧಪಟ್ಟ ವಿಷಯದ ಉತ್ತರ ಪತ್ರಿಕೆಯ ಛಾಯಾ ಪ್ರತಿಯನ್ನು ಪಡೆಯಬೇಕಾಗಿರುತ್ತದೆ. ಛಾಯಾ ಪ್ರತಿಯನ್ನು ಪಡೆದ ನಂತರ ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಖಚಿತಪಡಿಸಿಕೊಂಡ ನಂತರವೇ ಸದರಿ ಛಾಯಾ ಪ್ರತಿಯೊಂದಿಗೆ ಮಂಡಳಿಗೆ ಪತ್ರ ಬರೆದು ಸರಿಪಡಿಸಿಕೊಳ್ಳಬಹುದಾಗಿರುತ್ತದೆ. ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಪರಿಶೀಲಿಸಿ ಮಂಡಳಿಯ ವೆಚ್ಚದಲ್ಲಿ ಪರಿಷ್ಕೃತ ಫಲಿತಾಂಶಪಟ್ಟಿಯನ್ನು ಸಂಬಂಧಿಸಿದ ಶಾಲೆಗೆ ಹಾಗೂ ಈ ಬಗ್ಗೆ ಮಾಹಿತಿಯನ್ನು ವಿದ್ಯಾರ್ಥಿಗಳಿಗೆ ರವಾನಿಸಲಾಗುವುದು.

**2018ನೇ ಸಾಲಿನಿಂದ ಛಾಯಾಪ್ರತಿ ಹಾಗೂ ಮರುಮೌಲ್ಯಮಾಪನಕ್ಕಾಗಿ ಭೌತಿಕವಾಗಿ ಅರ್ಜಿಗಳನ್ನು ಸ್ವೀಕರಿಸುವುದನ್ನು ರದ್ದುಪಡಿಸಲಾಗಿದೆ.** ಮರುಎಣಿಕೆ ಅಥವಾ ಮರುಮೌಲ್ಯಮಾಪನ ಸೇವೆಯನ್ನು ಪಡೆಯಬೇಕಾದಲ್ಲಿ ಛಾಯಾಪ್ರತಿಯನ್ನು ಕಡ್ಡಾಯವಾಗಿ ಪಡೆಯಬೇಕಾಗಿರುತ್ತದೆ. ಛಾಯಾಪ್ರತಿ ಮತ್ತು ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್ ಅರ್ಜಿ ಸಲ್ಲಿಸಲು ಮಂಡಳಿಯ ಜಾಲತಾಣ ವಿಳಾಸ (website address):-www.kseeb.kar.nic.in ಲಭ್ಯವಿದ್ದು ಸದರಿ ಜಾಲತಾಣದಲ್ಲಿ ಆನ್‌ಲೈನ್‌ನಲ್ಲಿ ಕರ್ನಾಟಕ-ಒನ್ ಪೋರ್ಟಲ್‌ನಲ್ಲಿ ನಿಗದಿತ ಶುಲ್ಕವನ್ನು ಡೆಬಿಟ್ ಕಾರ್ಡ್/ಕ್ರೆಡಿಟ್ ಕಾರ್ಡ್ /ಆನ್‌ಲೈನ್ ಬ್ಯಾಂಕಿಂಗ್ ಮೂಲಕ ಪಾವತಿಸಿ ಅರ್ಜಿ ಸಲ್ಲಿಸಬಹುದಾಗಿದೆ. ಡೆಬಿಟ್ ಕಾರ್ಡ್/ಕ್ರೆಡಿಟ್ ಕಾರ್ಡ್/ ಆನ್‌ಲೈನ್ ಬ್ಯಾಂಕಿಂಗ್ ಸೌಲಭ್ಯವಿಲ್ಲದವರು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ಚಲನ್ ಡೌನ್‌ಲೋಡ್ ಮಾಡಿಕೊಂಡು ಕಾರ್ಪೋರೇಶನ್ ಬ್ಯಾಂಕ್/ಬೆಂಗಳೂರು-ಒನ್/ಕರ್ನಾಟಕ-ಒನ್‌ನಲ್ಲಿ ಶುಲ್ಕವನ್ನು ಪಾವತಿಸಬಹುದಾಗಿದೆ. ಛಾಯಾಪ್ರತಿ /ಮರುಮೌಲ್ಯಮಾಪನಕ್ಕಾಗಿ ಮೇಲ್ಕಂಡಂತೆ ಅರ್ಜಿ ಸಲ್ಲಿಸಿದ ನಂತರ ಅರ್ಜಿ ಸ್ವೀಕಾರವಾದ ಬಗ್ಗೆ ನೋಂದಾಯಿಸಿದ ಮೊಬೈಲ್ ಸಂಖ್ಯೆಗೆ ಎಸ್‌ಎಂಎಸ್ ಮುಖಾಂತರ ಮಾಹಿತಿ ರವಾನೆಯಾಗುತ್ತದೆ.

ಮೇಲೆ ತಿಳಿಸಿರುವಂತೆ ಎಲ್ಲಾ ವಿಷಯಗಳ ಅಥವಾ ಅಪೇಕ್ಷಿತ ವಿಷಯದ ಛಾಯಾಪ್ರತಿ ಪಡೆದ ಅಭ್ಯರ್ಥಿಗಳು ಉತ್ತರ ಪತ್ರಿಕೆಯ ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಕೆಳಗೆ ನಿಗಧಿಪಡಿಸಿರುವ ನಿಗಧಿತ ಶುಲ್ಕದೊಡನೆ ಅರ್ಜಿ ಸಲ್ಲಿಸಬೇಕು. ನಿಗಧಿತ ದಿನಾಂಕದ ನಂತರ ಮರುಮೌಲ್ಯಮಾಪನಕ್ಕಾಗಿ ಬರುವ ಅರ್ಜಿಗಳು ಆನ್‌ಲೈನ್‌ನಲ್ಲಿ ಸ್ವೀಕೃತವಾಗುವುದಿಲ್ಲ.

| ಶುಲ್ಕದ ವಿವರ: | |
|---|---|
| ಛಾಯಾಪ್ರತಿ ಒಂದು ವಿಷಯಕ್ಕೆ : | ರೂ. 305/ (ಮೂರು ನೂರ ಐದು ರೂಪಾಯಿಗಳು) |
| ಮರುಮೌಲ್ಯಮಾಪನ ಒಂದು ವಿಷಯಕ್ಕೆ : | ರೂ. 705/ (ಏಳು ನೂರ ಐದು ರೂಪಾಯಿಗಳು). |

ಛಾಯಾಪ್ರತಿಯನ್ನು ಭೌತಿಕವಾಗಿ ಅಂಚೆ ಮೂಲಕ ಅರ್ಜಿಯಲ್ಲಿ ನಮೂದಿಸಿದ ವಿಳಾಸಕ್ಕೆ ರವಾನಿಸುವ ಕಾರ್ಯವನ್ನು 2018ರ ಮಾರ್ಚ್/ಎಪ್ರಿಲ್ [redacted] ಪರೀಕ್ಷೆಯಿಂದ ಕೈಬಿಡಲಾಗಿದೆ. ಈ ಸಾಲಿನಿಂದ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲಾಗುವುದು. ಉತ್ತರ ಪತ್ರಿಕೆಗಳನ್ನು ಅಪ್‌ಲೋಡ್ ಮಾಡಿದ ಮಾಹಿತಿಯನ್ನು ವಿದ್ಯಾರ್ಥಿಗಳು ಅರ್ಜಿಯಲ್ಲಿ ನೀಡಿರುವ ಮೊಬೈಲ್ ಸಂಖ್ಯೆಗೆ ರವಾನಿಸಲಾಗುವುದು. ಸದರಿ ಮಾಹಿತಿ ಸ್ವೀಕೃತವಾದ ನಂತರ ವಿದ್ಯಾರ್ಥಿಗಳು ಉತ್ತರಪತ್ರಿಕೆಯನ್ನು ಮೇಲ್ಕಾಣಿಸಿದ ಜಾಲತಾಣದಿಂದ ಡೌನ್ ಲೋಡ್ ಮಾಡಿಕೊಳ್ಳಬಹುದಾಗಿರುತ್ತದೆ.

ಜೂನ್ 2018ರ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಯ ಶಾಲಾವಾರು ಫಲಿತಾಂಶ ಪಟ್ಟಿಯನ್ನು SATS ಜಾಲತಾಣದಲ್ಲಿ ಡೌನ್‌ಲೋಡ್ ಮಾಡಿಕೊಂಡು ಈ ಕೆಳಕಂಡ ಅಂಶಗಳ ಆಧಾರದ ಮೇಲೆ ನಿಮ್ಮ ಶಾಲೆಯ ಎಲ್ಲಾ ಅಭ್ಯರ್ಥಿಗಳ ಫಲಿತಾಂಶವನ್ನು ಮತ್ತು ಇತರೆ ಅಂಶಗಳನ್ನು ಕಡ್ಡಾಯವಾಗಿ ಪರಿಶೀಲಿಸಲು ತಿಳಿಸಿದೆ.

1. ನಿಮ್ಮ ಶಾಲೆಗೆ ಸಂಬಂಧಿಸಿದ ಎಲ್ಲಾ ಪುನರಾವರ್ತಿತ ಅಭ್ಯರ್ಥಿಗಳ ಫಲಿತಾಂಶ ಬಂದಿದೆಯೇ ಎಂಬುದನ್ನು ಪರಿಶೀಲಿಸಿಕೊಳ್ಳುವುದು.
2. ಒಂದು ವೇಳೆ ಯಾವುದಾದರೂ ಅಭ್ಯರ್ಥಿಯ/ಅಭ್ಯರ್ಥಿಗಳ ಫಲಿತಾಂಶ ಬಾರದಿದ್ದಲ್ಲಿ, ಫಲಿತಾಂಶ ತಡೆಹಿಡಿದಿದ್ದಲ್ಲಿ ಫಲಿತಾಂಶ ಪ್ರಕಟಿಸಿದ 10 ದಿನಗಳೊಳಗಾಗಿ ಸಕಾರಣಗಳೊಂದಿಗೆ ಮಂಡಳಿಯ ಪರಿಶೀಲನಾಧಿಕಾರಿಗಳಿಗೆ ಪತ್ರ ಬರೆದು ಫಲಿತಾಂಶ ಪಡೆದುಕೊಳ್ಳಲು ತಿಳಿಸಿದೆ. ಸಾಮಾನ್ಯವಾಗಿ ಪರೀಕ್ಷೆಗೆ ಗೈರು ಹಾಜರಾದ ಅಭ್ಯರ್ಥಿಗಳನ್ನು ಎ.ಎಂ.ಎಲ್. ಹಾಗೂ ಕೇಂದ್ರ ನಾಮಯಾದಿ ಪಟ್ಟಿಗಳ ಮೂಲಕ ಗುರುತಿಸಲಾಗುತ್ತದೆ. ಒಂದು ವೇಳೆ ಅಭ್ಯರ್ಥಿಯು ಗೈರುಹಾಜರಾಗದೇ ಪರೀಕ್ಷೆಗೆ ಹಾಜರಾಗಿದ್ದಲ್ಲಿ ಇಷ್ಯೂ ಶೀಟ್ಸ್ ಪುರಾವೆಯೊಂದಿಗೆ ಹತ್ತು ದಿನಗಳೊಳಗಾಗಿ ಮಂಡಳಿಯ ಗಮನಕ್ಕೆ ತರುವುದು. ಫಲಿತಾಂಶ ಪ್ರಕಟಣೆಯಾಗಿ ಹತ್ತು ದಿನಗಳ ನಂತರ ಈ ಬಗ್ಗೆ ಯಾವುದೇ ಕೋರಿಕೆ ಬಂದಲ್ಲಿ ಅದನ್ನು ಸ್ವೀಕರಿಸಲಾಗುವುದಿಲ್ಲ. ಮುಂದಿನ ಆಗುಹೋಗುಗಳಿಗೆ ಶಾಲಾ ಮುಖ್ಯಸ್ಥರೇ ಜವಾಬ್ದಾರರಾಗಿರುತ್ತಾರೆ.
3. ಅಭ್ಯರ್ಥಿಯ ಹೆಸರು, ತಂದೆಯ, ತಾಯಿಯ ಹೆಸರು, ಜನ್ಮದಿನಾಂಕ, ಮಾಧ್ಯಮ ಬದಲಾವಣೆ, ಅಭ್ಯರ್ಥಿಯು CCE ರೆಗ್ಯುಲರ್, ಪುನರಾವರ್ತಿತ, ಖಾಸಗಿ ಅಭ್ಯರ್ಥಿಯೇ ಇತ್ಯಾದಿ ಸಣ್ಣಪುಟ್ಟ ತಿದ್ದುಪಡಿಗಳನ್ನು ಫಲಿತಾಂಶ ಪ್ರಕಟವಾದ ಹತ್ತು ದಿನಗಳೊಳಗಾಗಿ ಸಂಬಂಧಿಸಿದ ಜಿಲ್ಲೆಯ ಪರಿಶೀಲನಾ ಶಾಖೆಗಳಿಗೆ ಪತ್ರ ಬರೆದು ಸರಿಪಡಿಸಿಕೊಳ್ಳುವುದು.
4. ಫಲಿತಾಂಶ ಪಟ್ಟಿಯಲ್ಲಿ ಪುನರಾವರ್ತಿತ ಅಭ್ಯರ್ಥಿಗಳ ಪೈಕಿ ಯಾವುದಾದರೂ ಅಭ್ಯರ್ಥಿಯು ಹಿಂದೆ ಉತ್ತೀರ್ಣರಾದ ವಿಷಯದಲ್ಲಿ ಗೈರುಹಾಜರಿ ಎಂದು ನಮೂದಾಗಿದ್ದು ಫಲಿತಾಂಶ ಅನುತ್ತೀರ್ಣ ಅಥವಾ ತಡೆಹಿಡಿದಿದ್ದಲ್ಲಿ ಅಭ್ಯರ್ಥಿಯ ಹಿಂದಿನ ಪ್ರಯತ್ನಗಳಲ್ಲಿ(ಚುಕ್ಕೆ ಗುರುತಿಲ್ಲದ) ಉತ್ತೀರ್ಣರಾದ ಫಲಿತಾಂಶ ಪಟ್ಟಿಯ ಪ್ರತಿಯನ್ನು ದೃಢೀಕರಿಸಿ ಮುಖ್ಯ ಶಿಕ್ಷಕರು ಮಂಡಳಿಗೆ ಕಳುಹಿಸುವುದು. ಫಲಿತಾಂಶ ಪ್ರಕಟವಾದ ಹತ್ತು ದಿನಗಳೊಳಗಾಗಿ ಪರಿಷ್ಕರಣೆ ಮಾಡಿಸಿಕೊಳ್ಳುವುದು.
5. ಪ್ರಕಟಿಸಿದ ಫಲಿತಾಂಶ ತಾತ್ಕಾಲಿಕವಾಗಿದ್ದು, ಅಭ್ಯರ್ಥಿಗೆ ಮಂಡಳಿಯಿಂದ ನೀಡುವ ಅಂಕಪಟ್ಟಿ ಪ್ರತಿಯೊಬ್ಬ ವಿದ್ಯಾರ್ಥಿಯ ನೈಜ ಫಲಿತಾಂಶವನ್ನು ತಿಳಿಸುತ್ತದೆ. ಅಂದರೆ ಅಂಕಪಟ್ಟಿಯಲ್ಲಿ ನೀಡಿದ ದತ್ತಾಂಶಗಳೇ ಅಂತಿಮ ಎಂದು ಭಾವಿಸತಕ್ಕದ್ದು.

(ವಿ. ಸುಮಂಗಲ)
ನಿರ್ದೇಶಕರು, ಪರೀಕ್ಷೆಗಳು 10/7/18

ಇವರಿಗೆ:

1. ರಾಜ್ಯದ ಎಲ್ಲಾ ಉಪನಿರ್ದೇಶಕರುಗಳಿಗೆ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಪ್ರೌಢ ಶಾಲಾ ಮುಖ್ಯಸ್ಥರುಗಳಿಗೆ ಸೂಕ್ತ ಕ್ರಮಕ್ಕಾಗಿ.
3. ಶಾಖಾಧಿಕಾರಿಗಳು ಗಣಕಶಾಖೆರವರು SATS ಜಾಲತಾಣದಲ್ಲಿ ಮತ್ತು ಮಂಡಳಿ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲು ಸೂಕ್ತ ಕ್ರಮಕ್ಕಾಗಿ.
4. ಕಛೇರಿ ಪ್ರತಿ.